**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ**

**ಸಿ.ಸಿ ನಂಬ್ರ: 271/2024**

ಸರ್ಕಾರದ ಪರ
ಕುಂದಾಪುರ ಠಾಣಾ ಪೊಲೀಸರು --- ಪಿರ್ಯಾದಿದಾರರು

-ಮತ್ತು-

ರಂಜಿತ್ ಪೂಜಾರಿ --- ಆರೋಪಿತರು

**:ದೋಷಾರೋಪಣೆ:**

**ಶ್ರೀಮತಿ ಶೃತಿ ಶ್ರೀ ಎಸ್. ಬಿ.ಎ., ಎಲ್‌ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆ:**

ರಂಜಿತ್ ಪೂಜಾರಿ, 25 ವರ್ಷ,
ತಂದೆ: ನಾರಾಯಣ ಪೂಜಾರಿ,
ವಾಸ: ಗುಡ್ಡೆಮನೆ, ಕಂಬದಕೋಣೆ,
ಕಾಲ್ತೋಡು ಗ್ರಾಮ, ಬೈಂದೂರು ತಾಲೂಕು.
ಉಡುಪಿ ಜಿಲ್ಲೆ. --- ಆರೋಪಿತರು

ಕುಂದಾಪುರ ತಾಲೂಕು ವಡೇರ್ ಹೋಬಳಿ ಗ್ರಾಮದ ಸರಕಾರಿ ನೌಕರರ ಸಂಘದ ಕಟ್ಟಡದ ಬಳಿ ಚಾ.ಸಾ.1 ನೇಯವರು ನಿಲ್ಲಿಸಿದ ಮೋಟಾರು ಸೈಕಲ್ ನೊಂದಣಿ ನಂಬ್ರ ಕೆಎ 12 ಇ 9604 ಅಂದಾಜು ಮೌಲ್ಯ ರೂ.25,000/- ವನ್ನು ದಿ. 26.11.2023 ರಂದು ಮಧ್ಯಾಹ್ನ ಸುಮಾರು 2.30 ಗಂಟೆಗೆ ಕಳವು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 379 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿನಾಂಕ: 22-04-2025

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ: 271/2024**

**ಫಿರ್ಯಾದುದಾರರು:** ಸರಕಾರದ ಪರವಾಗಿ ಕುಂದಾಪುರ ಠಾಣಾ ಪೋಲಿಸರು,

**- ವಿರುದ್ಧ -**

**ಆರೋಪಿ** : ರಂಜಿತ್ ಪೂಜಾರಿ, ತಂದೆ: ನಾರಾಯಣ ಪೂಜಾರಿ,

1. **ನಿಮಗೆ ಓದಿ ಹೇಳಿದ ದೋಷಾರೋಪಣೆಯು ಅರ್ಥವಾಗಿದೆಯೇ ?**
   **ಉ.**
2. **ನೀವು ತಪ್ಪನ್ನು ಒಪ್ಪಿಕೊಳ್ಳುತ್ತೀರ ಅಥವಾ ವಿಚಾರಣೆ ಮಾಡ ಬಯಸುವಿರಾ ?**
   **ಉ.**

**ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢೀಕರಿಸುತ್ತೇನೆ.**

ಹೆಚ್ಚುವರಿ **ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ.,** ಕುಂದಾಪುರ.